# ಸ್ಪೀಕರ್ ಹೇಳಿಕೆಗೆ ಅಸಮಾಧಾನ

ಬೆಂಗಳೂರು: ಬಜೆಟ್ ಅಧಿವೇಶನ ಮೊಟಕು ಸಂಬಂಧ ಸ್ಪೀಕರ್ ಅವರು ಕಾಂಗ್ರೆಸ್ ಬಗ್ಗೆ ಮಾತನಾಡಿರುವುದು ನೋಡಿದರೆ ಒಂದು ಪಕ್ಷದ ಒಂದು ಕಡೆ ವಹಿಸಿಕೊಂಡು ಮಾತನಾಡಿದಂತೆ ಕಾಣುತ್ತದೆ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷಗಳ ಪಾತ್ರ ಬಹು ದೊಡ್ಡದು. ಸರ್ಕಾರ ತಪ್ಪು ನಿರ್ಧಾರ, ಭ್ರಷ್ಟಾಚಾರ, ಅಭಿವೃದ್ಧಿಗೆ ವಿರುದ್ಧವಾದ ತೀರ್ಮಾನಗಳನ್ನು ಕೈಗೊಂಡರೆ ಬಯಲು ಮಾಡುವುದು, ಕಿವಿ ಹಿಂಡುವುದು ವಿರೋಧ ಪಕ್ಷದ ಕೆಲಸ ಅಲ್ಲವೇ ಎಂದು ಪ್ರಶ್ನಿಸಿದರು.

ಕಲಾಪ ದುರುಪಯೋಗಪಡಿಸಿಕೊಳ್ಳುವುದಾಗಲಿ, ನಡೆಯದಂತೆ ಮಾಡುವುದು ನಮ್ಮ ಉದ್ದೇಶವಾಗಿರಲಿಲ್ಲ. ಸದನ ನಡೆಯಲು ನಾವು ಸಹಕಾರ ಕೊಟ್ಟಿದ್ದೇವೆ. ನಾನು ಬಜೆಟ್ ಮೇಲೆ ಭಾಷಣ ಮಾಡಿದ್ದೇನೆ. ಮೂರು ನಿಲುವಳಿ ಸೂಚನೆ ಮಂಡಿಸಿದ್ದೇನೆ. ನಮ್ಮ ಶಾಸಕರೂ ಬಜೆಟ್ ಮೇಲೆ ಮಾತನಾಡಿದ್ದಾರೆ ಎಂದರು.

**ಬಸವಕಲ್ಯಾಣ ವಿಧಾನಸಭೆ ಕ್ಷೇತ್ರಕ್ಕೆ ನಡೆಯುವ ಉಪ ಚುನಾವಣೆಯಲ್ಲಿ ಜೆಡಿಎಸ್ ಅಲ್ಪ ಸಂಖ್ಯಾತ ಸಮುದಾಯದ ವರನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸಿದೆ. ಇದು ಹೊಂದಾಣಿಕೆ ರಾಜಕಾರಣ. ಅಲ್ಪ ಸಂಖ್ಯಾತರ ಮತಗಳನ್ನು ವಿಭಜನೆ ಮಾಡುವುದು ಇದರ ಉದ್ದೇಶ. ಬಿಜೆಪಿ ಜತೆ ಜೆಡಿಎಸ್ ಕೈ ಜೋಡಿಸಿ ರುವುದು ಇದರಿಂದ ಸ್ಪಷ್ಟವಾಗುತ್ತದೆ.**

- **ಸಿದ್ದರಾಮಯ್ಯ,** ಪ್ರತಿಪಕ್ಷ ನಾಯಕ

ಸಿ.ಡಿ. ವಿಚಾರ ಸಾರ್ವಜನಿಕ ವಲಯದಲ್ಲಿ ಚರ್ಚೆಯ ವಸ್ತು ಆಗಿರುವಾಗ ನಾವು ಸುಮ್ಮನೆ ಕೂರಲಾಗದು. ಸರ್ಕಾರ ಸರಿಯಾಗಿ ಉತ್ತರ ಕೊಡದಿದ್ದಾಗ, ನಮ್ಮ ಬೇಡಿಕೆ ಈಡೇರಿಸದೇ ಇದ್ದಾಗ ಧರಣಿ ಮಾಡಿದ್ದೇವೆ.ಇಷ್ಟಕ್ಕೂ ಧರಣಿ ನಡೆಯುವಾಗ ವಿಧೇಯಕ ಅಂಗೀಕಾರ ಮಾಡುವುದು ಯಾವ ಪ್ರಜಾಪ್ರಭುತ್ವ ಎಂದಿದ್ದಾರೆ.

## ತಮಿಳುನಾಡು ಪ್ರಚಾರ ಕಣಕ್ಕೆ ರಾಜ್ಯದ ಕಾಂಗ್ರೆಸ್ ನಾಯಕರು

ಬೆಂಗಳೂರು: ತಮಿಳುನಾಡು ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಸಚಿವ ಜಮೀರ್ ಅಹಮದ್ ಸೇರಿದಂತೆ ರಾಜ್ಯ ಕಾಂಗ್ರೆಸ್ ನಾಯಕರು ಶನಿವಾರ ಪ್ರಚಾರದಲ್ಲಿ ಪಾಲ್ಗೊಳ್ಳಲಿದ್ದಾರೆ. ಕೃಷ್ಣಗಿರಿ ಜಿಲ್ಲೆಯ ತಳಿ, ಡೆಂಕಣಿಕೋಟ, ಹೊಸೂರು, ಬಾಗಲೂರು, ಬೇರಿಗೆ, ಸೂಲಗಿರಿ ಹಾಗೂ ವೇಪನಪಲ್ಲಿಯಲ್ಲಿ ಚುನಾವಣಾ ಪ್ರಚಾರ ಸಭೆಗಳಲ್ಲಿ ಭಾಷಣ ಮಾಡಲಿದ್ದಾರೆ. ಕರ್ನಾಟಕದ ಗಡಿ ಭಾಗದಲ್ಲಿರುವ ಕೃಷ್ಣಗಿರಿ ಜಿಲ್ಲೆಯಲ್ಲಿ ಕನ್ನಡಿಗ ಹಾಗೂ ತೆಲುಗು ಮತ್ತು ತಮಿಳು ಮತದಾರರು ಹೆಚ್ಚಾಗಿದ್ದಾರೆ. ಪ್ರಚಾರಕ್ಕೆ ಸಿದ್ದರಾಮಯ್ಯ ಅವರು ಬರುವಂತೆ ಅಲ್ಲಿನ ಕಾಂಗ್ರೆಸ್ ನಾಯಕರು ಮನವಿ ಮಾಡಿದ್ದರು. ಡಿ.ಕೆ.ಶಿವಕುಮಾರ್, ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಹಿರಿಯ ನಾಯಕರು ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿದ್ದಾರೆ.